ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಬಿಡುಗಡೆಯಾದ ಅನುದಾನ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು):-

216 (204) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಎರಡು ವರ್ಷಗಳಲ್ಲಿ ತೋಟಗಾರಿಕಾ ಬೆಳೆಗಳ ಅಭಿವೃದ್ಧಿಗೆ ಮಂಜೂರು ಮಾಡಲಾದ ಒಟ್ಟು ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿ ತೆಂಗಿನ ಬೆಳೆ ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತೆಂಗು ಬೆಳೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಯಾವ ಯಾವ ಹೊಸ ಯೋಜನೆಗಳನ್ನು ರೂಪಿಸಿದೆ ;

(ಇ) ತುಮಕೂರು ಜಿಲ್ಲೆಯ ತೆಂಗು ಅಭಿವೃದ್ಧಿಗಾಗಿ ಕಳೆದೆರಡು ವರ್ಷಗಳಿಂದ ನೀಡಲಾದ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು; (ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆ, ಚಿಕ್ಕನಾಯಕನಹಳ್ಳಿ ಬೆಳ್ಳಾರದಲ್ಲಿ ತೋಟಗಾರಿಕೆ ಇಲಾಖೆಯ ಎಷ್ಟು ಭೂಪ್ರದೇಶವಿದೆ ; ಅಲ್ಲಿ ಯಾವ ತೋಟಗಾರಿಕೆ ಚಟುವಟಿಕೆ ನಡೆಯುತ್ತಿದೆ ? (ಮಾಹಿತಿ ನೀಡುವುದು)